# Akashvani : Bangalore
# National Bulletin In Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**16.04.2024** **19.35 hrs**

**<><*<><>*><>**

ಮುಖ್ಯಾಂಶಗಳು

೧. ಲೋಕಸಭಾ ಚುನಾವಣೆ; ವಿವಿಧ ರಾಜಕೀಯ ಪಕ್ಷಗಳಿಂದ ಪ್ರಚಾರ ಬಿರುಸು

೨. ಇಸ್ರೇಲ್- ಇರಾನ್ ಸಂಘರ್ಷ - ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಕಳವಳ

೩. ಕೇಂದ್ರ ಲೋಕಸೇವಾ ಆಯೋಗದ ಅಂತಿಮ ಫಲಿತಾಂಶ ಪ್ರಕಟ; ಆದಿತ್ಯ ಶ್ರೀವಾಸ್ತವ್ ಅಗ್ರಸ್ಥಾನ

೪. ಐಪಿಎಲ್ ಟಿ-೨೦ ಕ್ರಿಕೆಟ್; ಇಂದು ಕೋಲ್ಕತ್ತಾ ನೈಟ್ ರೈಡರ್ಸ್ -ರಾಜಸ್ಥಾನ್ ರಾಯಲ್ಸ್ ತಂಡಗಳು ಮುಖಾಮುಖಿ

**<><*<><>*><>**

ಇದೇ ೧೯ ರಂದು ೧೦೨ ಲೋಕಸಭಾ ಕ್ಷೇತ್ರಗಳಿಗೆ ಮೊದಲನೇ ಹಂತದ ಮತದಾನ ನಡೆಯಲಿದ್ದು, ಬಹಿರಂಗ ಪ್ರಚಾರ ನಾಳೆ ಅಂತ್ಯವಾಗಲಿದೆ. ೨೧ ರಾಜ್ಯಗಳಲ್ಲಿ ಮತದಾನ ನಡೆಯಲಿದೆ. ಮಹಾರಾಷ್ಟ್ರ ಮತ್ತು ಚತ್ತೀಸ್‌ಘಡ ನಕ್ಸಲ್ ಪ್ರದೇಶಗಳಲ್ಲಿ ಬಿಗಿ ಭದ್ರತೆ ಕಲ್ಪಿಸಲಾಗಿದೆ. ಬಿಹಾರ, ಮಧ್ಯಪ್ರದೇಶ, ರಾಜಸ್ಥಾನ, ಜಮ್ಮು-ಕಾಶ್ಮೀರ, ಉತ್ತರಪ್ರದೇಶ, ಪಶ್ಚಿಮ ಬಂಗಾಳ ಸೇರಿದಂತೆ ೨೧ ರಾಜ್ಯಗಳಲ್ಲಿ ಚುನಾವಣೆ ನಡೆಯಲಿದೆ. ಈ ನಡುವೆ ವಿವಿಧ ರಾಜಕೀಯ ಪಕ್ಷಗಳ ನಾಯಕರು ಅಬ್ಬರದ ಪ್ರಚಾರದಲ್ಲಿ ನಿರತರಾಗಿದ್ದಾರೆ. ಬಿಜೆಪಿ ಹಿರಿಯ ನಾಯಕ ಹಾಗೂ ಪ್ರಧಾನಿ ನರೇಂದ್ರ ಮೋದಿ ಬಿಹಾರದ ಗಯಾದಲ್ಲಿ ಮತಯಾಚಿಸಿ, ಬಿಜೆಪಿ ಅಧಿಕಾರಕ್ಕೆ ಬಂದರೆ, ಸಂವಿಧಾನವನ್ನು ಬದಲಾಯಿಸಲಿದೆ ಎಂದು ಪ್ರತಿಪಕ್ಷಗಳು ಜನರನ್ನು ದಿಕ್ಕುತಪ್ಪಿಸುತ್ತಿವೆ ಎಂದು ಹೇಳಿದರು. ಸಂವಿಧಾನವನ್ನು ಯಾರು ಬದಲಾಯಿಸಲು ಸಾಧ್ಯವಿಲ್ಲ. ಕಾಂಗ್ರೆಸ್ ಮತ್ತು ಅದರ ಮಿತ್ರಪಕ್ಷಗಳು ಸನಾತನ ಧರ್ಮವನ್ನು ಅವಮಾನಿಸುತ್ತಿವೆ ಎಂದು ಆರೋಪಿಸಿದರು. ಅಸ್ಸಾಂನಲ್ಲಿ ಕಾಂಗ್ರೆಸ್ ನಾಯಕಿ ಪ್ರಿಯಾಂಕ ಗಾಂಧಿ ವಾದ್ರಾ, ಅಭ್ಯರ್ಥಿಗಳ ಪರ ರೋಡ್ ಶೋ ಮೂಲಕ ಮತಯಾಚಿಸಿದರು. ಮತ್ತೊಂದೆಡೆ ಕೇರಳದ ಕೋಯಿಕ್ಕೋಡ್‌ನಲ್ಲಿ ರಾಹುಲ್ ಗಾಂಧಿ ರ‍್ಯಾಲಿ ನಡೆಸಿ ಬಿರುಸಿನ ಪ್ರಚಾರ ಕೈಗೊಂಡರು.

**<><*<><>*><>**

ಬಿಜೆಪಿ ಹಿರಿಯ ನಾಯಕ, ಕೇಂದ್ರ ಗೃಹ ಸಚಿವ ಅಮಿತ್ ಶಾ, ಜಮ್ಮುವಿನಲ್ಲಿ ಚುನಾವಣಾ ಪ್ರಚಾರ ನಡೆಸಿದರು. ಈ ವೇಳೆ ಅವರು, ಯುವಕರ ಕೈಯಲ್ಲಿ ಬಂದೂಕು ನೀಡುವ ಮೂಲಕ ಕಾಂಗ್ರೆಸ್, ನ್ಯಾಷನಲ್ ಕಾನ್ಫರೆನ್ಸ್ ಹಾಗೂ ಪೀಪಲ್ಸ್ ಡೆಮಾಕ್ರಟಿಕ್ ಪಾರ್ಟಿ ಭಯೋತ್ಪಾದನೆಗೆ ಬೆಂಬಲ ನೀಡುತ್ತಿದೆ ಎಂದು ಆರೋಪಿಸಿದರು. ಬಳಿಕ ಅವರು, ಉತ್ತರಾಖಂಡದ ಕೋಟದ್ವಾರದಲ್ಲಿ ಎನ್‌ಡಿಎ ಅಭ್ಯರ್ಥಿಗಳ ಪರ

ಮತಯಾಚಿಸಿದರು. ಇನ್ನೊಂದೆಡೆ ಜಮ್ಮು-ಕಾಶ್ಮೀರದ ಕಿಸ್ತ್ವಾರ್‌ನಲ್ಲಿ ಬಿಜೆಪಿ ಹಿರಿಯ ನಾಯಕ, ಕೇಂದ್ರ ಸಚಿವ ಅನುರಾಗ್ ಸಿಂಗ್ ಠಾಕೂರ್, ಮತಯಾಚನೆ ಮಾಡಿದರು. ಈ ವೇಳೆ ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ಕಳೆದ ೭೦ ವರ್ಷಗಳಲ್ಲಿ ಪ್ರತಿಪಕ್ಷಗಳು ಜಮ್ಮು-ಕಾಶ್ಮೀರಕ್ಕೆ ಯಾವುದೇ ಕೊಡುಗೆ ನೀಡಿಲ್ಲ ಎಂದು ಹೇಳಿದರು.  ಆದರೆ, ಕಳೆದ ಹತ್ತು ವರ್ಷಗಳಲ್ಲಿ ಬಿಜೆಪಿ ಸರ್ಕಾರ, ಜಮ್ಮು-ಕಾಶ್ಮೀರದಲ್ಲಿ ಹೆಚ್ಚಿನ ಅಭಿವೃದ್ಧಿ ಯೋಜನೆಗಳನ್ನು ಕೈಗೊಂಡಿದೆ ಎಂದು ತಿಳಿಸಿದರು.

<><*<><>*><>

ಮುಂಬರುವ ಲೋಕಸಭೆ ಚುನಾವಣೆಗೆ ಬಹುಜನ ಸಮಾಜ ಪಕ್ಷ ಹನ್ನೊಂದು ಅಭ್ಯರ್ಥಿಗಳ ಹೆಸರನ್ನು ಪ್ರಕಟಿಸಿದೆ. ವಾರಣಾಸಿಯಿಂದ ಬಿಎಸ್‌ಪಿ ಅಭ್ಯರ್ಥಿ ಅಥರ್ ಜಮಾಲ್ ಲಾರಿ, ಪ್ರಧಾನಿ ಮತ್ತು ಬಿಜೆಪಿ ಅಭ್ಯರ್ಥಿ ನರೇಂದ್ರ ಮೋದಿ ವಿರುದ್ಧ ಕಣಕ್ಕಿಳಿದಿದ್ದಾರೆ.  ಈ ನಡುವೆ ಮೈನ್‌ಪುರಿ ಲೋಕಸಭಾ ಕ್ಷೇತ್ರದ ಅಭ್ಯರ್ಥಿಯನ್ನು ಬದಲಿಸಿ ಶಿವಪ್ರಸಾದ್ ಯಾದವ್‌ರನ್ನು ಕಣಕ್ಕಿಳಿಸಿದೆ. ಬಿಜೆಪಿಯೂ ಒಡಿಶಾ ವಿಧಾನಸಭೆ ಮತ್ತು ತೆಲಂಗಾಣ ಮತ್ತು ಉತ್ತರ ಪ್ರದೇಶ ವಿಧಾನಸಭೆ ಉಪಚುನಾವಣೆಗೆ ಅಭ್ಯರ್ಥಿಗಳ ಪಟ್ಟಿಯನ್ನು ಬಿಡುಗಡೆ ಮಾಡಿದೆ. ಒಡಿಶಾ ವಿಧಾನಸಭಾ ಚುನಾವಣೆಗೆ ಬಿಜೆಪಿ ೨೧ ಅಭ್ಯರ್ಥಿಗಳ ಹೆಸರನ್ನು ಪ್ರಕಟಿಸಿದ್ದು, ಮಹಾರಾಷ್ಟ್ರ, ಪಂಜಾಬ್, ಉತ್ತರ ಪ್ರದೇಶ ಮತ್ತು ಪಶ್ಚಿಮ ಬಂಗಾಳದ ಲೋಕಸಭಾ ಕ್ಷೇತ್ರಗಳಿಗೆ ಏಳು ಅಭ್ಯರ್ಥಿಗಳ ಪಟ್ಟಿಯನ್ನು ಬಿಡುಗಡೆ ಮಾಡಿದೆ.  ಏತನ್ಮಧ್ಯೆ, ತೆಲಂಗಾಣ ಮತ್ತು ಉತ್ತರ ಪ್ರದೇಶದ ಉಪಚುನಾವಣೆಗೆ ಬಿಜೆಪಿ ಐದು ಅಭ್ಯರ್ಥಿಗಳ ಪಟ್ಟಿಯನ್ನು ಬಿಡುಗಡೆ ಮಾಡಿದೆ.

<><*<><>*><>

ದೇಶದಲ್ಲಿ ಲೋಕಸಭಾ ಚುನಾವಣೆಯ ಮಾದರಿ ನೀತಿ ಸಂಹಿತೆ ಜಾರಿಯಾದ ಬಳಿಕ, ವಿವಿಧ ರಾಜಕೀಯ ಪಕ್ಷಗಳು ಮತ್ತು ಅಭ್ಯರ್ಥಿಗಳಿಂದ ಸುಮಾರು ೨೦೦ ದೂರುಗಳು ದಾಖಲಾಗಿವೆ ಎಂದು ಕೇಂದ್ರ ಚುನಾವಣಾ ಆಯೋಗ ತಿಳಿಸಿದೆ.

೧೬೯ ಪ್ರಕರಣಗಳಲ್ಲಿ ಕ್ರಮ ಕೈಗೊಳ್ಳಲಾಗಿದೆ. ಬಿಜೆಪಿಯಿಂದ ೫೧, ಕಾಂಗ್ರೆಸ್‌ನಿಂದ ೫೯ ಮತ್ತು ಇತರ ರಾಜಕೀಯ ಪಕ್ಷಗಳಿಂದ ೯೦ ದೂರುಗಳು ಬಂದಿವೆ ಎಂದು ಆಯೋಗ ತಿಳಿಸಿದೆ.

ರಾಜಕೀಯ ಪಕ್ಷಗಳ ನೀತಿ ಸಂಹಿತೆ ಪಾಲನೆಗೆ ಆಯೋಗ ತೃಪ್ತಿ ವ್ಯಕ್ತಪಡಿಸಿದೆ.  ಜೊತೆಗೆ ವಿವಿಧ ಪಕ್ಷಗಳು ಮತ್ತು ಅಭ್ಯರ್ಥಿಗಳ ಪ್ರಚಾರ ಗೊಂದಲ ಮುಕ್ತವಾಗಿವೆ ಎಂದು ಹೇಳಿದೆ.

ಮಹಿಳೆಯರ ವಿರುದ್ಧ ಅವಹೇಳನಕಾರಿ ಮತ್ತು ಆಕ್ಷೇಪಾರ್ಹ ಟೀಕೆಗಳನ್ನು ಮಾಡಿದ ಪಕ್ಷಗಳ ನಾಯಕರಿಗೆ ನೋಟಿಸ್ ನೀಡುವ ಮೂಲಕ ಮಹಿಳೆಯರ ಘನತೆ ಮತ್ತು ಗೌರವದ ವಿಷಯದಲ್ಲಿ ಆಯೋಗ ದೃಢ ನಿಲುವು ತೆಗೆದುಕೊಂಡಿದೆ.

<><*<><>*><>

ಶಾಂತಿಯುತ ಹಾಗೂ ನ್ಯಾಯಸಮ್ಮತ ಚುನಾವಣೆಗಾಗಿ ಮಹಾರಾಷ್ಟ್ರದ ನಕ್ಸಲ್ ಪೀಡಿತ ಗಡ್ಚಿರೋಲಿ-ಚಿಮೂರ್ ಲೋಕಸಭಾ ಕ್ಷೇತ್ರದ ಸೂಕ್ಷ್ಮ ಮತಗಟ್ಟೆಗಳಿಗೆ ಸಿಬ್ಬಂದಿಯನ್ನು ಏರ್‌ಲಿಫ್ಟ್ ಮಾಡಲಾಗಿದೆ. ೨೯೫ ಮತಗಟ್ಟೆ ಅಧಿಕಾರಿಗಳು ೬೮ ಸಿಬ್ಬಂದಿ ಮತ್ತು ಇವಿಎಂ ಮಿಷನ್‌ಗಳನ್ನು, ೬೮ ಅತಿಸೂಕ್ಷ್ಮ ಮತಗಟ್ಟೆಗಳ ಬೇಸ್‌ಕ್ಯಾಂಪ್‌ಗಳಿಗೆ ಸುರಕ್ಷಿತವಾಗಿ ಇಳಿಸಲಾಗಿದೆ. ಗಡ್ಚಿರೋಲಿ ಚಿಮೂರ್ ಲೋಕಸಭಾ ಕ್ಷೇತ್ರವು, ೬ ವಿಧಾನಸಭಾ ಕ್ಷೇತ್ರಗಳನ್ನು ಒಳಗೊಂಡಿದ್ದು, ಅಹೇರಿ ವಿಧಾನಸಭಾ ಕ್ಷೇತ್ರವನ್ನು ಅತ್ಯಂತ ಸೂಕ್ಷ್ಮ ಮತ್ತು ನಕ್ಸಲ್ ಪೀಡಿತವೆಂದು ಗುರುತಿಸಲಾಗಿದೆ.

<><*<><>*><>

ಇಸ್ರೇಲ್ - ಇರಾನ್ ಸಂಘರ್ಷ ಜಾಗತಿಕವಾಗಿ ತೀವ್ರ ಕಳವಳಕ್ಕೆ ಕಾರಣವಾಗಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಹೇಳಿದ್ದಾರೆ. ಇನ್ಸ್ಟಿಟ್ಯೂಟ್ ಆಫ್ ಕಂಪೆನಿ ಸೆಕ್ರೆಟರೀಸ್ ಆಫ್ ಇಂಡಿಯಾ - ಬೆಂಗಳೂರು ಚಾಪ್ಟರ್ ನಲ್ಲಿ ಆಯೋಜಿಸಿದ್ದ "ವಿಶ್ವಬಂಧು ಭಾರತ್" ಕುರಿತ ಸಂವಾದದಲ್ಲಿ ಮಾತನಾಡಿದ ಅವರು, ವಿಶ್ವದ ಯಾವುದೇ ಸಂಘರ್ಷ, ಬಿಕ್ಕಟ್ಟು ಜಾಗತಿಕವಾಗಿ ಪರಿಣಾಮ ಬೀರುತ್ತದೆ. ಜಾಗತಿಕವಾಗಿ ತೈಲ ಬೆಲೆ, ಆಹಾರ ದರಗಳ ಏರಿಕೆ, ಹಣದುಬ್ಬರ ಹೆಚ್ಚಳ ಒಳಗೊಂಡಂತೆ ಹಲವಾರು ಸಮಸ್ಯೆಗಳಿಗೆ ಕಾರಣವಾಗುತ್ತದೆ. ಜಗತ್ತಿನ ಎಲ್ಲಾ ಸಂಘರ್ಷ, ಸಮಸ್ಯೆಗಳಿಗೆ "ವಿಶ್ವಬಂಧು" ಪರಿಕಲ್ಪನೆಯೇ ಪರಿಹಾರವಾಗಿದೆ ಎಂದು ಪ್ರತಿಪಾದಿಸಿದರು. ಇರಾನ್ ನಲ್ಲಿ ಭಾರತದ ಹಡಗು ಸಿಲುಕಿಕೊಂಡಿದ್ದು, ೧೭ ಭಾರತೀಯರಿದ್ದು, ಇವರನ್ನು ಸುರಕ್ಷಿತವಾಗಿ ಕರೆ ತರಲು ಪ್ರಯತ್ನಗಳನ್ನು ಕೈಗೊಳ್ಳಲಾಗಿದೆ. ಈ ಭಾಗದಲ್ಲಿ ಸುಮಾರು ೧೮ ದಶಲಕ್ಷ ಭಾರತೀಯರು ನೆಲೆಸಿದ್ದು, ಇವರ ಸುರಕ್ಷತೆಯೂ ಸಹ ನಮ್ಮ ಜವಾಬ್ದಾರಿಯಾಗಿದೆ ಎಂದು ಹೇಳಿದರು.

<><*<><>*><>

ಕೇಂದ್ರ ಲೋಕಸೇವಾ ಆಯೋಗ - ಯುಪಿಎಸ್‌ಸಿ ೨೦೨೩ ಅಂತಿಮ ಫಲಿತಾಂಶ ಪ್ರಕಟಿಸಿದೆ. ಆದಿತ್ಯ ಶ್ರೀವಾಸ್ತವ್ ಪರೀಕ್ಷೆಯಲ್ಲಿ ಅಗ್ರಸ್ಥಾನ ಪಡೆದಿದ್ದಾರೆ. ಅನಿಮೇಶ್ ಪ್ರಧಾನ್ ದ್ವಿತೀಯ ಹಾಗೂ ಡೋಣೂರು ಅನನ್ಯಾ ರೆಡ್ಡಿ ತೃತೀಯ ಸ್ಥಾನ ಗಳಿಸಿದ್ದಾರೆ. ಆಯೋಗವು ಒಟ್ಟು ಒಂದು ಸಾವಿರದ ಹದಿನಾರು ಅಭ್ಯರ್ಥಿಗಳನ್ನು ನೇಮಕಾತಿಗೆ ಶಿಫಾರಸು ಮಾಡಿದೆ. ಯುಪಿಎಸ್‌ಸಿಯಲ್ಲಿ ಉತ್ತೀರ್ಣರಾದ ಎಲ್ಲಾ ಅಭ್ಯರ್ಥಿಗಳಿಗೆ ಪ್ರಧಾನಿ ನರೇಂದ್ರ ಮೋದಿ ಅಭಿನಂದನೆ ಸಲ್ಲಿಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ಅವರು, ನಿಮ್ಮ ಪ್ರಯತ್ನಗಳು ಮುಂದಿನ ದಿನಗಳಲ್ಲಿ ದೇಶದ ಭವಿಷ್ಯವನ್ನು ರೂಪಿಸುತ್ತವೆ ಎಂದು ಹೇಳಿದ್ದಾರೆ. ನಿರೀಕ್ಷಿತ ಯಶಸ್ಸು ಸಾಧಿಸದ ಅಭ್ಯರ್ಥಿಗಳು ನೆನಪಿಟ್ಟುಕೊಳ್ಳಬೇಕಾದದ್ದು ಏನೆಂದರೆ, ಇದು ಅವರ ಪ್ರಯಾಣದ ಅಂತ್ಯವಲ್ಲ ಎಂದು ಪ್ರಧಾನಿ ಹುರಿದುಂಬಿಸಿದ್ದಾರೆ.

<><*<><>*><>

ಭಾರತೀಯ ಹವಾಮಾನ ಇಲಾಖೆ ದೇಶದ ವಿವಿಧ ಭಾಗಗಳಲ್ಲಿ ಮುಂದಿನ ಐದು ದಿನಗಳ ಕಾಲ ಬಿಸಿಗಾಳಿಯ ಮುನ್ಸೂಚನೆ ನೀಡಿದೆ. ಗೋವಾ, ಮಹಾರಾಷ್ಟ್ರ, ಗುಜರಾತ್‌ನ ಕೆಲವು ಭಾಗಗಳಲ್ಲಿ ನಾಳೆಯವರೆಗೆ ಬಿಸಿ ಗಾಳಿ ಮುಂದುವರೆಯಲಿದೆ. ಕರ್ನಾಟಕ ಮತ್ತು ಕೇರಳದ ಕೆಲವೆಡೆ ಮುಂದಿನ ಎರಡು ದಿನಗಳ ಕಾಲ ಬಿಸಿಗಾಳಿ ಮುಂದುವರೆಯಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಈ ನಡುವೆ ಈಶಾನ್ಯ ಭಾರತ ಮತ್ತು ಪಶ್ಚಿಮ ಬಂಗಾಳದಲ್ಲಿ ಲಘುವಾಗಿ ಗುಡುಗು, ಮಿಂಚಿನ ಸಹಿತ ಮಳೆಯಾಗಲಿದೆ ಎಂದು ಇಲಾಖೆ ಮುನ್ಸೂಚನೆ ನೀಡಿದೆ. ಈ ವರ್ಷ ದೇಶದಲ್ಲಿ ವಾಡಿಕೆಯಂತೆ ಸಾಮಾನ್ಯ ಮುಂಗಾರು ಮಳೆಯಾಗುವ ಸಾಧ್ಯತೆಯಿದೆ ಎಂದು ತಿಳಿಸಿದೆ. ನವದೆಹಲಿಯಲ್ಲಿ ನೈಋತ್ಯ ಮುಂಗಾರು ಮಳೆಯ ಮುನ್ಸೂಚನೆ ಕುರಿತು ಮಾಧ್ಯಮಗಳಿಗೆ ಮಾಹಿತಿ ನೀಡಿದ ಭೂ ವಿಜ್ಞಾನ ಸಚಿವಾಲಯದ ಕಾರ್ಯದರ್ಶಿ ಡಾ.ಎಂ.ರವಿಚಂದ್ರನ್, ಜೂನ್‌ನಿಂದ, ಸೆಪ್ಟೆಂಬರ್‌ವರೆಗಿನ ಮುಂಗಾರು ಮಳೆಯು ದೀರ್ಘಾವಧಿಯ ಸರಾಸರಿಯ ೧೦೬ ಪ್ರತಿಶತದಷ್ಟು ಇರುತ್ತದೆ ಎಂದು ಹೇಳಿದ್ದಾರೆ.

<><*<><>*><>

ಕರ್ನಾಟಕದ ಕೆಲವು ಜಿಲ್ಲೆಗಳಲ್ಲಿ ಇದೇ ೧೮ ಮತ್ತು ೧೯ ರಂದು ಧಾರಾಕಾರ ಮಳೆಯಾಗುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಮುಂದಿನ ಎರಡು ದಿನ ಎಲ್ಲಾ ೩೧ ಜಿಲ್ಲೆಗಳಲ್ಲೂ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ. ಪ್ರತಿ ಗಂಟೆಗೆ ೩೦ ರಿಂದ ೪೦ ಕಿಲೋಮೀಟರ್ ವೇಗದಲ್ಲಿ ಗಾಳಿ ಬೀಸುವ ಸಾಧ್ಯತೆಯಿದೆ ಎಂದು ಮುನ್ನೆಚ್ಚರಿಕೆ ನೀಡಲಾಗಿದೆ. ಬಳ್ಳಾರಿ, ಚಿಕ್ಕಮಗಳೂರು, ಹಾಸನ, ಕೊಡಗು, ಮೈಸೂರು ಜಿಲ್ಲೆಯ ಕೆಲವು ಪ್ರದೇಶಗಳಲ್ಲಿ ಮಂಗಳವಾರ ಹಗುರ ಮಳೆಯಾಗುವ ಸಾಧ್ಯತೆಯಿದೆ. ಉತ್ತರ ಒಳನಾಡು ಮಲೆನಾಡಿನ ಕೆಲವು ಪ್ರದೇಶಗಳಲ್ಲಿ ಬುಧವಾರ ಮಳೆಯಾಗಲಿದೆ ಎಂದು ಇಲಾಖೆಯ ವರದಿ ತಿಳಿಸಿದೆ.

**<><*<><>*><>**

ಕನ್ನಡ ಚಿತ್ರರಂಗದ ಹಿರಿಯ ಹಾಸ್ಯನಟ, ನಿರ್ದೇಶಕ, ನಿರ್ಮಾಪಕ ದ್ವಾರಕೀಶ್ ನಿಧನರಾಗಿದ್ದಾರೆ. ಅವರಿಗೆ ೮೧ ವರ್ಷ ವಯಸ್ಸಾಗಿತ್ತು. ಕಳೆದ ಕೆಲವು ದಿನಗಳಿಂದ ಅನಾರೋಗ್ಯದಿಂದ ಬಳಲುತ್ತಿದ್ದರು. ೧೯೪೨ ರಲ್ಲಿ ಮೈಸೂರು ಜಿಲ್ಲೆ ಹುಣಸೂರಿನಲ್ಲಿ ಜನಿಸಿದ ಅವರು, ೬೦ರ ದಶಕದಲ್ಲಿ ಕನ್ನಡ ಚಿತ್ರರಂಗಕ್ಕೆ ಪದಾರ್ಪಣೆ ಮಾಡಿದ್ದರು. ಸುಮಾರು ೨೦೦ಕ್ಕೂ ಹೆಚ್ಚು ಚಿತ್ರಗಳಲ್ಲಿ ನಟಿಸಿ ಮನೆ ಮಾತಾಗಿದ್ದಾರೆ. ಸಿನಿಮಾ ಜೀವನದಲ್ಲಿ ಹೆಚ್ಚಾಗಿ ಹಾಸ್ಯ ಕಲಾವಿದರಾಗಿಯೇ ಗುರುತಿಸಿಕೊಂಡಿದ್ದರು. ಗುರುಶಿಷ್ಯರು, ಪ್ರಚಂಡ ಕುಳ್ಳ, ಮಂಕು ತಿಮ್ಮ, ಪೆದ್ದಗೆದ್ದ, ಕುಳ್ಳ ಏಜೆಂಟ್-೦೦೦, ಮೇಯರ್ ಮುತ್ತಣ್ಣ, ಸಿಂಗಾಪುರದಲ್ಲಿ ರಾಜಾಕುಳ್ಳ ಮುಂತಾದ ಚಿತ್ರಗಳಲ್ಲಿ ಮನೋಜ್ಞ ಅಭಿನಯ ನೀಡಿದ್ದರು. ಅವರ ನಿಧನಕ್ಕೆ ಅನೇಕ ಗಣ್ಯರು, ನಟ-ನಟಿಯರು ನಿರ್ದೇಶಕರು, ನಿರ್ಮಾಪಕರು ಕಂಬನಿ ಮಿಡಿದಿದ್ದಾರೆ.

**<><*<><>*><>**

ಕೇಂದ್ರ ಸರ್ಕಾರದ ಆರೋಗ್ಯ ಯೋಜನೆ ದಾಖಲೆಗಳನ್ನು ಆಯುಷ್ಮಾನ್ ಭಾರತ್ ಆರೋಗ್ಯ ಖಾತೆಗೆ ಸೇರಿಸುವ ಕುರಿತಂತೆ ತಪ್ಪು ಮಾಹಿತಿಯನ್ನು ಹರಡಲಾಗುತ್ತಿದೆ ಎಂದು ಕೇಂದ್ರ ಆರೋಗ್ಯ ಸಚಿವಾಲಯ ತಿಳಿಸಿದೆ. ರೋಗಿಗಳು ಹಾಗೂ ಕೇಂದ್ರ ಸರ್ಕಾರದ ಆರೋಗ್ಯ ಯೋಜನೆಯ ಫಲಾನುಭವಿಗಳು ತಮ್ಮ ವೈದ್ಯಕೀಯ ದಾಖಲೆಗಳನ್ನು ಮೊಬೈಲ್ ಫೋನ್‌ಗಳಲ್ಲಿ ಸಂಗ್ರಹಿಸುವ ಗುರಿ ಹೊಂದಲಾಗಿದೆ. ದಾಖಲೆಗಳನ್ನು ಲಿಂಕ್ ಮಾಡುವುದರಿಂದ ಆಸ್ಪತ್ರೆಗಳು ವೈದ್ಯಕೀಯ ದಾಖಲೆ ಸಂಗ್ರಹಿಸಲು, ಹಣ ಮತ್ತು ಸಮಯ ವ್ಯರ್ಥವಾಗುವುದನ್ನು ತಡೆಯುತ್ತದೆ. ಜನರ ಆರ್ಥಿಕ ಸ್ಥಿತಿಯನ್ನು ಪತ್ತೆಹಚ್ಚಲು ಸರ್ಕಾರ ಆಯುಷ್ಮಾನ್ ಭಾರತ್ ಆರೋಗ್ಯ ಖಾತೆ ಬಳಸುತ್ತಿದೆ ಎಂಬ ಆರೋಪಗಳನ್ನು ಸಚಿವಾಲಯ ತಳ್ಳಿಹಾಕಿದೆ.

**<><*<><>*><>**

ಅಸ್ಸಾಂನಲ್ಲಿ ಶಂಕಿತ ಯುನೈಟೆಡ್ ಲಿಬರೇಶನ್ ಫ್ರಂಟ್ ಆಫ್ ಅಸ್ಸಾಂ ಸಂಘಟನೆಯ ಪರೇಶ್ ಬರುವಾ ಬಣ, ಅಸ್ಸಾಂ ರೈಫಲ್ಸ್ ಯೋಧರು ತೆರಳುತ್ತಿದ್ದವಾಹನದ ಮೇಲೆ ದಾಳಿ ನಡೆಸಿದೆ. ಈ ವೇಳೆ ಅಸ್ಸಾಂ ರೈಫಲ್ಸ್‌ನ ಓರ್ವ ಸಿಬ್ಬಂದಿ ಗಾಯಗೊಂಡಿದ್ದು, ಅವರನ್ನು ಚಿಕಿತ್ಸೆಗಾಗಿ ಜೋರ್ಹತ್‌ಗೆ ವಿಶೇಷ ವಿಮಾನದಲ್ಲಿ ರವಾನಿಸಲಾಗಿದೆ ಎಂದು ರಕ್ಷಣಾ ಮೂಲಗಳು ತಿಳಿಸಿವೆ.

**<><*<><>*><>**

ಕೋಲ್ಕತ್ತಾದ ಈಡನ್ ಗಾರ್ಡನ್‌ನಲ್ಲಿಂದು ನಡೆಯುತ್ತಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಕೋಲ್ಕತ್ತಾ ನೈಟ್ ರೈಡರ್ಸ್ ಮತ್ತು ರಾಜಸ್ಥಾನ್ ರಾಯಲ್ಸ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ರಾಜಸ್ಥಾನ್ ರಾಯಲ್ಸ್, ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಿಗ್ಗೆ ೭.೦೫ <>*><>**